All India Radio: Bangalore
Regional Bulletin In Kannada
03.01.2026 / 6.40 p.m.
ಆಕಾಶವಾಣಿ ಬೆಂಗಳೂರು
ಪ್ರದೇಶ ಸಮಾಚಾರ

ಮುಖ್ಯಾಂಶಗಳು

- ಬಳ್ಳಾರಿ ಕಾಂಗ್ರೆಸ್ ಕಾರ್ಯಕರ್ತ ಸಾವಿನ ಪ್ರಕರಣ ; ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅಮಾನತು ಸಮರ್ಥಿಸಿಕೊಂಡ ಗೃಹ ಸಚಿವ ಪರಮೇಶ್ವರ್
- ರಾಯಚೂರಿನ ಸಿಂಧನೂರಿನಲ್ಲಿ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಚಾಲನೆ ನೀಡಿದ ಮುಖ್ಯಮಂತ್ರಿ ಸಿದ್ದರಾಮಯ್ಯ
- ಹುಬ್ಬಳ್ಳಿ ಮಾನ್ಯ ಕೊಲೆ ಪ್ರಕರಣದ ಪ್ರಬಲ ಸಾಕ್ಷ್ಯ ಲಭ್ಯ ; ಡಿಜಿಪಿ ಡಾ.ಕೆ.ರಾಮಚಂದ್ರ ರಾವ್ ಸ್ಪಷ್ಟನೆ
- ಗ್ರೇಟರ್ ಬೆಂಗಳೂರು ಪ್ರಾಧಿಕಾರದ ಆಸ್ಪತ್ರೆಗಳ ಮೇಲ್ದರ್ಜೆಗೆ ನಿರ್ಧಾರ ; ಮುಖ್ಯ ಆಯುಕ್ತ ಮಹೇಶ್ವರ್ ರಾವ್
- ವಿಜಯ ಹಜಾರೆ ಟೂರ್ನಿ ; ತ್ರಿಪುರಾ ವಿರುದ್ಧ ಕರ್ನಾಟಕಕ್ಕೆ ೮೦ ರನ್‌ಗಳ ಜಯ

***************

ಬಳ್ಳಾರಿ ಗಲಭೆ ಪ್ರಕರಣಕ್ಕೆ ಸಂಬಂಧಿಸಿದಂತೆ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪವನ್ ನೆಜ್ಜೂರ್ ಅವರನ್ನು ಅನಿವಾರ್ಯವಾಗಿ ಅಮಾನತು ಮಾಡಬೇಕಾಯಿತು ಎಂದು ಗೃಹ ಸಚಿವ ಡಾ. ಜಿ. ಪರಮೇಶ್ವರ್ ಹೇಳಿದ್ದಾರೆ.

ತುಮಕೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಗಲಭೆ ನಡೆದ ಸ್ಥಳಕ್ಕೆ ಹೋಗಿ ನಿಯಂತ್ರಿಸದ ಹಾಗೂ ಸಿಬ್ಬಂದಿಗೆ ನಿರ್ದೇಶನ ನೀಡಿ ಸರಿಯಾದ ನಿರ್ಧಾರ ತೆಗೆದುಕೊಳ್ಳದ ಹಿನ್ನೆಲೆಯಲ್ಲಿ ಅಮಾನತು ಮಾಡಲಾಗಿದೆ ಎಂದು ತಿಳಿಸಿದ್ದಾರೆ.

ಕರ್ತವ್ಯಕ್ಕೆ ಹಾಜರಾಗುವ ವಿಚಾರದಲ್ಲಿ ಒಂದು ದಿನ, ಒಂದು ಗಂಟೆ ಎಂಬುದು ಮುಖ್ಯವಲ್ಲ. ತಕ್ಷಣಕ್ಕೆ ಸ್ಥಳಕ್ಕೆ ತೆರಳಿ ಗುಂಪು ನಿಯಂತ್ರಿಸಿದ್ದರೆ ಪರಿಸ್ಥಿತಿ ಗುಂಡು ಹಾರಿಸುವ ಹಂತಕ್ಕೆ ಹೋಗುತ್ತಿರಲಿಲ್ಲ ಎಂದು ಸ್ಪಷ್ಟಪಡಿಸಿದ್ದಾರೆ.

***************

ಬಳ್ಳಾರಿ ಘಟನೆ ಕುರಿತಂತೆ ಸರ್ಕಾರ ಶಾಸಕ ಭರತ್ ರೆಡ್ಡಿ ಪರವಾಗಿ ನಿಲ್ಲಲಿದೆ ಎಂದು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಸ್ಪಷ್ಟಪಡಿಸಿದ್ದಾರೆ.

ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಜನಾರ್ದನರೆಡ್ಡಿ ಬಳ್ಳಾರಿಗೆ ಕಾಲಿಡುವವರೆಗೂ ಸಣ್ಣ ಅಹಿತಕರ ಘಟನೆಯೂ ಆಗಿರಲಿಲ್ಲ. ಅವರು ಬಂದ ಮೇಲೆಯೇ ಗಲಭೆ ನಡೆದಿದೆ ಎಂದು ಆರೋಪಿಸಿದ್ದಾರೆ.

ಕಾಂಗ್ರೆಸ್ ಪಕ್ಷ ಕಾರ್ಯಕರ್ತನನ್ನು ಕಳೆದುಕೊಂಡಿದ್ದು, ಇದಕ್ಕೆ ಕಾರಣ ಯಾರು ಎಂಬುದು ತನಿಖೆಯಿಂದ ತಿಳಿಯಲಿದೆ ಎಂದು ತಿಳಿಸಿದ್ದಾರೆ. ಈ ಪ್ರಕರಣದ ಬೆನ್ನಲ್ಲೇ ಎಲ್ಲ ಖಾಸಗಿ ಗನ್‌ಗಳನ್ನು ಮುಟ್ಟುಗೋಲು ಹಾಕಿಕೊಳ್ಳಲಾಗಿದ್ದು, ಗನ್ ವಿತರಣೆ ವಿಚಾರದಲ್ಲಿ ನಿಯಮಾವಳಿ ರೂಪಿಸಲಾಗುವುದು ಎಂದು ತಿಳಿಸಿದ್ದಾರೆ.

ಬಳ್ಳಾರಿಯಲ್ಲಿ ಬಿಜೆಪಿ ನಾಯಕರಿಗೆ ಸೋಲು ಅರಗಿಸಿಕೊಳ್ಳಲು ಆಗುತ್ತಿಲ್ಲ ಎಂದು ಡಿ.ಕೆ.ಶಿವಕುಮಾರ್ ಟೀಕಿಸಿದ್ದಾರೆ.

***************

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು, ಇಂದು ಸಿಂಧನೂರು ವಿಧಾನಸಭಾ ಕ್ಷೇತ್ರದ ವಿವಿಧ ಅಭಿವೃದ್ಧಿ ಕಾಮಗಾರಿಗಳ ಶಂಕುಸ್ಥಾಪನೆ ಮತ್ತು ಲೋಕಾರ್ಪಣೆ ನೆರವೇರಿಸಿದರು.

ಈ ಸಂದರ್ಭದಲ್ಲಿ ಸಚಿವರಾದ ಶರಣಪ್ರಕಾಶ್ ಪಾಟೀಲ್, ಶಿವರಾಜ್ ತಂಗಡಗಿ, ರಾಮಲಿಂಗಾರೆಡ್ಡಿ, ಶಾಸಕ ಅಮರೇಗೌಡ ಬಯ್ಯಾಪುರ ಸೇರಿ ಜಿಲ್ಲೆಯ ಜನಪ್ರತಿನಿಧಿಗಳು ಉಪಸ್ಥಿತರಿದ್ದರು.

ಇದಕ್ಕೂ ಮೊದಲು ಅವರು, ಸಿಂಧನೂರು ತಾಲ್ಲೂಕಿನ ಸೋಮಲಾಪುರ ಗ್ರಾಮದ ಶ್ರೀ ಅಂಬಾ ದೇವಿ ಜಾತ್ರಾ ಮಹೋತ್ಸವದಲ್ಲಿ ಪಾಲ್ಗೊಂಡು ಮಹಾರಥೋತ್ಸವ ಮತ್ತು ಜಂಬೂ ಸವಾರಿಗೆ ಚಾಲನೆ ನೀಡಿದರು.

***************

ಹುಬ್ಬಳ್ಳಿ ಮರ್ಯಾದಾ ಹತ್ಯೆ ಪ್ರಕರಣದ ಹಿನ್ನಲೆಯಲ್ಲಿ ಗ್ರಾಮದಲ್ಲಿ ಶಾಂತಿ, ಸುವ್ಯವಸ್ಥೆ ಮತ್ತು ಸೌಹಾರ್ದತೆ ಕಾಪಾಡಲು ಪೊಲೀಸ್ ಇಲಾಖೆ  ಅಗತ್ಯ ಕ್ರಮ ಕೈಗೊಂಡಿದೆ ಎಂದು ನಾಗರಿಕ ಹಕ್ಕುಗಳ ಜಾರಿ ನಿರ್ದೇಶನಾಲಯದ  ಡಿಜಿಪಿ ಡಾ.ಕೆ.ರಾಮಚಂದ್ರರಾವ್ ತಿಳಿಸಿದ್ದಾರೆ.

ಇನಾಂವೀರಾಪೂರ ಗ್ರಾಮ ಮತ್ತು ವಿವೇಕಾನಂದ ದೊಡಮನಿ ಕುಟುಂಬಸ್ಥರನ್ನು  ಭೇಟಿ ಮಾಡಿದ ಬಳಿಕ ಸುದ್ದಿಗಾರರೊಂದಿಗೆ ಮಾತಾಡಿದ ಅವರು,

ಈ ಪ್ರಕರಣಕ್ಕೆ ಸಂಬಂಧಿಸಿದಂತೆ ೧೪ ಜನರ ವಿರುದ್ಧ ದೂರು ದಾಖಲಿಸಲಾಗಿದೆ. ಈಗಾಗಲೇ ೮ ಜನರನ್ನು ಬಂಧಿಸಲಾಗಿದೆ. ಒಬ್ಬ ಅಪ್ರಾಪ್ತ ವಯಸ್ಕನಾಗಿದ್ದು, ಉಳಿದ ಐವರು ಮಹಿಳೆಯರಿದ್ದಾರೆ. ಸಿಸಿಟಿವಿ ಮುಖ್ಯ ಸಾಕ್ಷಿಯಾಗಿದ್ದು, ಅದನ್ನು ವಶಕ್ಕೆ ಪಡೆಯಲಾಗಿದೆ ಎಂದು ಸ್ಪಷ್ಟಪಡಿಸಿದ್ದಾರೆ.

***************

ಮರ್ಯಾದೆ ಹತ್ಯೆಗೆ ಹೊಸ ಕಾನೂನು ಅವಶ್ಯಕತೆ ಇಲ್ಲ ಎಂದು ವಿಧಾನ ಪರಿಷತ್ ಪ್ರತಿಪಕ್ಷ ನಾಯಕ ಛಲುವಾದಿ ನಾರಾಯಣಸ್ವಾಮಿ ತಿಳಿಸಿದ್ದಾರೆ.

ಹುಬ್ಬಳ್ಳಿಯಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸದ್ಯ ಇರುವ ಕಾನೂನು ಕ್ರಮಗಳಲ್ಲಿ ಶಿಕ್ಷೆ ನೀಡುವಂತೆ ಸರ್ಕಾರವನ್ನು ಒತ್ತಾಯಿಸಿದ್ದಾರೆ.

ಜಿಲ್ಲಾಡಳಿತದ ದಿವ್ಯ ನಿರ್ಲಕ್ಷವೇ ಈ ಘಟನೆಗೆ ಕಾರಣ ಎಂದು ದೂರಿದ್ದಾರೆ.

ಧ್ವನಿ - ಛಲವಾದಿ ನಾರಾಯಣಸ್ವಾಮಿ

ಸಂಸದ ಗೋವಿಂದ ಕಾರಜೋಳ ಮಾತನಾಡಿ, ಇದು ಮನುಕುವೇ ತಲೆ ತಗ್ಗಿಸುವ ಘಟನೆಯಾಗಿದೆ. ಗ್ರಾಮದಲ್ಲಿ ವಿವೇಕಾನಂದ ಕುಟುಂಬಕ್ಕೆ ಜೀವ ಭಯ ಇದ್ದು, ಹುಬ್ಬಳ್ಳಿಗೆ ಸ್ಥಳಾಂತರ ಮಾಡಬೇಕು. ಮಾನ್ಯ ಪತಿ ವಿವೇಕಾನಂದನಿಗೆ ಸರ್ಕಾರಿ ನೌಕರಿ ನೀಡಬೇಕೆಂದು ಆಗ್ರಹಿಸಿದ್ದಾರೆ.

***************

ಗ್ರೇಟರ್ ಬೆಂಗಳೂರು ಪ್ರಾಧಿಕಾರದ ಆಸ್ಪತ್ರೆಗಳನ್ನು ಮೇಲ್ದರ್ಜೆಗೇರಿಸಲು ನಿರ್ಧರಿಸಲಾಗಿದೆ ಎಂದು ಜಿಬಿಎ ಮುಖ್ಯ ಆಯುಕ್ತ ಮಹೇಶ್ವರ್ ರಾವ್ ತಿಳಿಸಿದ್ದಾರೆ.

ಜಿಬಿಎ ವ್ಯಾಪ್ತಿಯಲ್ಲಿ ಸ್ಥಳೀಯ ಹೆರಿಗೆ ಆಸ್ಪತ್ರೆಗಳು ಹಾಗೂ ರಾಜೀವ್ ಗಾಂಧಿ ವಸತಿ ಯೋಜನೆ ಬಗ್ಗೆ ಪರಿಶೀಲನೆ ನಡೆಸಿ ಮಾತನಾಡಿದ ಅವರು, ಬೆಂಗಳೂರಿನ ಪ್ರತಿಯೊಂದು ಪಾಲಿಕೆಯ ೧೦ ರಸ್ತೆಗಳನ್ನು ಸಮಗ್ರ ನಿರ್ವಹಣೆ ಮಾಡಲಾಗುವುದು ಎಂದು ಹೇಳಿದ್ದಾರೆ.

ಇದೇ ವೇಳೆ ರಾಜೀವ್ ಗಾಂಧಿ ವಸತಿ ಯೋಜನೆ ಕುರಿತಂತೆ ಪ್ರತಿಕ್ರಿಯಿಸಿ ಪಟ್ಟಿಯ ಕುರಿತು ಆಶ್ರಯ ಸಮಿತಿಯ ಪರಿಶೀಲನೆ ಅಗತ್ಯ ಎಂದು ಸ್ಪಷ್ಟಪಡಿಸಿದ್ದಾರೆ.

***************

ಯಲಹಂಕದ ಕೋಗಿಲು ಬಡಾವಣೆ ಬಳಿ ೨೦೦ಕ್ಕೂ ಅಧಿಕ ಮನೆಗಳನ್ನು ನೆಲಸಮ ಮಾಡಿರುವ ಕುರಿತು ಅದರ ಹಿಂದಿರುವ ಸತ್ಯಾಸತ್ಯತೆಯನ್ನು ತಿಳಿಯುವ ಸಲುವಾಗಿ ರಚಿಸಲಾದ ಬಿಜೆಪಿಯ ಸತ್ಯ ಶೋಧನಾ ತಂಡವು ಇಂದು ಸ್ಥಳಕ್ಕೆ ಭೇಟಿ ನೀಡಿ ಮಾಹಿತಿ ಪಡೆಯಿತು.

ಶಾಸಕ ಎಸ್.ಮುನಿರಾಜು, ಬಿಜೆಪಿ ನಾಯಕರಾದ ಮಾಳವಿಕ ಅವಿನಾಶ್ ಸೇರಿದಂತೆ ಹಲವರು ಸಂತ್ರಸ್ತರ ಅಹವಾಲುಗಳನ್ನು ಆಲಿಸಿದರು. ಈ ನಡುವೆ ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಪ್ರತಿಪಕ್ಷ ನಾಯಕ ಆರ್. ಅಶೋಕ ವಲಸಿಗರಿಗೆ ವಸತಿ ನೀಡುವುದು ಕಾನೂನು ಪ್ರಕಾರ ತಪ್ಪು ಎಂದು ತಿಳಿಸಿದ್ದಾರೆ.

***************

ಇಂಧನ ಸೋರಿಕೆ, ವಿದ್ಯುತ್ ಅಡಚಣೆ ಹಾಗೂ ಆರ್ಥಿಕ ಹೊರೆಯನ್ನು ಕಡಿಮೆ ಮಾಡುವ ನಿಟ್ಟಿನಲ್ಲಿ ತಾಂತ್ರಿಕ ನಿರ್ವಹಣೆ ಅವಶ್ಯಕವಾಗಿದೆ ಎಂದು ಸೆಸ್ಕ್‌ನ ವ್ಯವಸ್ಥಾಪಕ ನಿರ್ದೇಶಕ ಕೆ.ಎಂ.ಮುನಿಗೋಪಾಲ್ ರಾಜು ತಿಳಿಸಿದ್ದಾರೆ. ಮೈಸೂರಿನಲ್ಲಿ ಸೆಸ್ಕ್ ಅಧಿಕಾರಿಗಳೊಂದಿಗೆ ಸಭೆ ನಡೆಸಿದ ಅವರು, ಅಧಿಕಾರಿಗಳು ಸಮರ್ಪಕ ತಾಂತ್ರಿಕ ನಿರ್ವಹಣೆಗೆ ಮುಂದಾಗಬೇಕು ಎಂದು ಹೇಳಿದ್ದಾರೆ.

ಇಂಧನ ಸೋರಿಕೆ ತಡೆಯುವಲ್ಲಿ ತಾಂತ್ರಿಕ ಪರಿಣತಿ ಮುಖ್ಯವಾಗಿದೆ. ಈ ಹಿಂದೆ ಸಕಲೇಶಪುರದ ಬಾಳುಪೇಟೆ ಫೀಡರ್‌ನಲ್ಲಿ ಎನರ್ಜಿ ಆಡಿಟಿಂಗ್ ನಡೆಸಿದ ಸಂದರ್ಭದಲ್ಲಿ ಶೇಕಡ ೪೦ ರಿಂದ ೪೫ರಷ್ಟು ಇಂಧನ ಸೋರಿಕೆ ಕಂಡುಬಂದಿತ್ತು. ಸಮರ್ಪಕ ತಾಂತ್ರಿಕ ನಿರ್ವಹಣೆ ಮಾಡಿದ ಹಿನ್ನೆಲೆಯಲ್ಲಿ ಇಂಧನ ಸೋರಿಕೆಯನ್ನು ಶೇಕಡ ೧೨ಕ್ಕೆ ಇಳಿಕೆ ಮಾಡುವಲ್ಲಿ ಅಧಿಕಾರಿಗಳು ಯಶಸ್ವಿಯಾಗಿದ್ದಾರೆ.

ಪ್ರಸ್ತುತ ಇಂಧನ ಇಲಾಖೆ ಹೊಸತನಕ್ಕೆ ಆದ್ಯತೆ ನೀಡಿ, ೫ ಸಾವಿರ ಮೆಗಾ ವ್ಯಾಟ್ ವಿದ್ಯುತ್ ಉತ್ಪಾದಿಸಲು ಕಾರ್ಯಯೋಜನೆ ರೂಪಿಸಿದೆ ಎಂದು ಸ್ಪಷ್ಟಪಡಿಸಿದ್ದಾರೆ.

***************

ಬಾಗಲಕೋಟೆ ವಿಧಾನಸಭಾ ಮತಕ್ಷೇತ್ರದ ಮತದಾರರ ಪಟ್ಟಿ ವಿಶೇಷ ಪರಿಷ್ಕರಣೆಗೆ ಸಂಬಂಧಿಸಿದಂತೆ ಕರಡು ಮತದಾರರ ಪಟ್ಟಿಯನ್ನು ಪ್ರಕಟಣೆ ಮಾಡಲಾಗಿದೆ. ಹಕ್ಕುಗಳು ಮತ್ತು ಆಕ್ಷೇಪಣೆಗಳನ್ನು ಇದೇ ೨೪ ವರೆಗೆ ಸಲ್ಲಿಸಬಹುದಾಗಿದೆ ಎಂದು ಜಿಲ್ಲಾಧಿಕಾರಿ ಸಂಗಪ್ಪ ತಿಳಿಸಿದ್ದಾರೆ.

ವಿವಿಧ ರಾಜಕೀಯ ಪಕ್ಷಗಳ ಮುಖಂಡರ ಜೊತೆ ನಡೆದ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಸಾರ್ವಜನಿಕರು ಮತದಾರರ ಪಟ್ಟಿಯಲ್ಲಿ ತಮ್ಮ ಹೆಸರು ಹಾಗೂ ವಿವರಗಳು ಸರಿಯಾಗಿ ಇರುವದರ ಬಗ್ಗೆ ಪರಿಶೀಲಿಸಿಕೊಳ್ಳಬಹುದಾಗಿದೆ ಎಂದು ಹೇಳಿದ್ದಾರೆ.

***************

ವಿಜಯಪುರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಕೃಷಿ ಇಲಾಖೆ ಸಹಯೋಗದಲ್ಲಿ ಇಂದು ಆಯೋಜಿಸಲಾದ ಸಿರಿಧಾನ್ಯ ನಡಿಗೆ ಕಾರ್ಯಕ್ರಮಕ್ಕೆ ಜಿಲ್ಲಾಧಿಕಾರಿ ಆನಂದ ಕೆ. ಹಸಿರು ನಿಶಾನೆ ತೋರಿದರು.

ಈ ವೇಳೆ ಮಾತನಾಡಿದ ಅವರು, ಆರೋಗ್ಯಕರ ಸಮಾಜ ನಿರ್ಮಾಣಕ್ಕೆ ಸಿರಿಧಾನ್ಯಗಳ ಬಳಕೆ ಅತ್ಯಗತ್ಯವಾಗಿದೆ ಎಂದು ಅಭಿಪ್ರಾಯಪಟ್ಟರು.

ಮಧುಮೇಹ, ರಕ್ತದೊತ್ತಡದಂತಹ ರೋಗಗಳಿಂದ ದೂರ ಉಳಿಯಲು ಸಿರಿಧಾನ್ಯಗಳು ಅತ್ಯಂತ ಸಹಕಾರಿ ಆಗಿವೆ ಎಂದು ಹೇಳಿದರು.

***************

ಮಂಡ್ಯ ತಾಲ್ಲೂಕಿನ ಇಂಡುವಾಳು ಗ್ರಾಮ ಪಂಚಾಯಿತಿಯಲ್ಲಿ ನಡೆದ ಕಡತ ನಾಪತ್ತೆ ಪ್ರಕರಣದ ಹಿನ್ನೆಲೆಯಲ್ಲಿ ಮಂಡ್ಯ ಜಿಲ್ಲೆಯಾದ್ಯಂತ ಗ್ರಾಮ ಪಂಚಾಯಿತಿಗಳಲ್ಲಿ ಸುಸಜ್ಜಿತ ಅಭಿಲೇಖಾಲಯ ನಿರ್ವಹಣೆ ಮಾಡುವಂತೆ ಅಭಿಯಾನ ಹಮ್ಮಿಕೊಳ್ಳಲಾಗಿದೆ.

ಅಭಿಯಾನದ ಫಲವಾಗಿ ಈವರೆಗೆ ೧೨೯ ಗ್ರಾಮ ಪಂಚಾಯತ್‌ಗಳಲ್ಲಿ ಅಭಿಲೇಖಾಲಯವನ್ನು ಸುಸಜ್ಜಿತವಾಗಿ ಸಜ್ಜುಗೊಳಿಸಲಾಗಿದ್ದು ಗ್ರಾಮಪಂಚಾಯಿತಿ ಅಧಿಕಾರಿಗಳನ್ನು ಮಂಡ್ಯ ಮುಖ್ಯ ಕಾರ್ಯನಿರ್ವಹಣಾಧಿಕಾರಿ ನಂದಿನಿ ಅಭಿನಂದಿಸಿದ್ದಾರೆ.

***************

ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ರಾಷ್ಟ್ರಕವಿ ಡಾ.ಜಿ.ಎಸ್.ಶಿವರುದ್ರಪ್ಪ ಪ್ರತಿಷ್ಠಾನದ ವತಿಯಿಂದ ಇದೇ ೬ ರಂದು ಭಾರತೀಯ ವಿಮರ್ಶೆ: ಸಮಕಾಲೀನ ಸಂದರ್ಭ ಎಂಬ ಒಂದು ದಿನದ ರಾಷ್ಟ್ರೀಯ ಸಂವಾದ ಕಾರ್ಯಕ್ರಮವನ್ನು ಬೆಂಗಳೂರಿನ ಕನ್ನಡ ಭವನದಲ್ಲಿ ಹಮ್ಮಿಕೊಳ್ಳಲಾಗಿದೆ.

ಹಿರಿಯ ಕವಿ ಎಚ್.ಎಸ್.ಶಿವಪ್ರಕಾಶ್ ಕಾರ್ಯಕ್ರಮದ ಉದ್ಘಾಟನೆ ನೆರವೇರಿಸಲಿದ್ದಾರೆ.

***************

ಅಹಮದಾಬಾದ್‌ನ ನರೇಂದ್ರ ಮೋದಿ ಕ್ರೀಡಾಂಗಣದಲ್ಲಿ ತ್ರಿಪುರಾ ವಿರುದ್ಧ ನಡೆದ ವಿಜಯ್ ಹಜಾರೆ ಟೂರ್ನಿಯ ಗ್ರೂಪ್ ಎ ಪಂದ್ಯದಲ್ಲಿ ಕರ್ನಾಟಕ ೮೦ ರನ್‌ಗಳಿಂದ ಜಯಗಳಿಸಿದೆ.

ಕರ್ನಾಟಕ ನೀಡಿದ ೩೩೩ ರನ್‌ಗಳ ಗುರಿ ಬೆನ್ನತ್ತಿದ ತ್ರಿಪುರಾ ೪೯ ಓವರ್‌ಗಳಲ್ಲಿ ಎಲ್ಲಾ ವಿಕೆಟ್ ಕಳೆದುಕೊಂಡು ೨೫೨ ರನ್‌ಗಳಿಸಲಷ್ಟೇ ಶಕ್ತವಾಯಿತು.

ಕರ್ನಾಟಕದ ಪರ ಶ್ರೇಯಸ್ ಗೋಪಾಲ್ ಹಾಗೂ ವಿಜಯ್ ಕುಮಾರ್ ವೈಶಾಖ್ ತಲಾ ಮೂರು ವಿಕೆಟ್ ಪಡೆದಿದ್ದಾರೆ.

ದೇವದತ್ ಪಡಿಕ್ಕಲ್ ಕೇವಲ ೧೦೫ ಎಸೆತಗಳಲ್ಲಿ ಶತಕ ಪೂರ್ಣಗೊಳಿಸಿದ್ದಾರೆ. ಇದು ವಿಜಯ್ ಹಜಾರೆ ಟೂರ್ನಿಯಲ್ಲಿ ಪಡಿಕ್ಕಲ್ ಅವರ ನಾಲ್ಕನೇ ಶತಕವಾಗಿದೆ.

*******ಮುಕ್ತಾಯ*******